# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2425 |
| ಸದಸ್ಯರ ಹೆಸರು | : | ಶ್ರೀ ಎಸ್.ವ್ಹಿ. ಸಂಕನೂರ ( ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 27.03.2026 |
| ಉತ್ತರಿಸುವ ಸಚಿವರು | : | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರದ ಆದೇಶ ಸಂಖ್ಯೆ: ಪಿ.ಎಚ್.ಎಸ್. 262 ಎಸ್.ಇ.ಡಬ್ಲ್ಯೂ 65 ದಿನಾಂಕ: 01.02.1966 ರ ಪ್ರಕಾರ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಈಗಾಗಲೇ ಸೇರ್ಪಡೆಗೊಂಡಿರುವ 46 ಅಲೆಮಾರಿ, ಅರೆ-ಅಲೆಮಾರಿ ಜಾತಿ ಪಟ್ಟಿಯನ್ನು ಪರಿಷ್ಕರಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ; | ಶ್ರೀ ಕೆ. ಜಯಪ್ರಕಾಶ ಹೆಗ್ಡೆ ರವರ ನೇತೃತ್ವದ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಪ್ರಥಮ ವರದಿ-2022 ರಲ್ಲಿ ಕಾಡುಗೊಲ್ಲ, ಹಟ್ಟಿಗೊಲ್ಲ, ಖಂಜಿರ್‌ಭಾಟ್, ಕಂಜರ್, ಖಂಜಾರ್‌ಭಾಟ್, ಚಪ್ಪರಬಂದ ಮತ್ತು ಕುಡುಬಿ ಸಮುದಾಯಗಳನ್ನು ಹಾಗೂ ದ್ವಿತೀಯ ವರದಿ-2023 ರಲ್ಲಿ ಗೌಳಿ ಸಮುದಾಯವನ್ನು ಅಲೆಮಾರಿ/ ಅರೆ ಅಲೆಮಾರಿ ಪಟ್ಟಿಗೆ ಸೇರಿಸುವಂತೆ ವರದಿ ಸಲ್ಲಿಸಿದ್ದು, ಪರಿಶೀಲನೆಯಲ್ಲಿರುತ್ತದೆ.<br><br>ರಾಜ್ಯದ ಹಿಂದುಳಿದ ವರ್ಗಗಳಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಕಲ್ಪಿಸಿರುವ ಮೀಸಲಾತಿಯನ್ನು ಮರು ವರ್ಗೀಕರಿಸಿರುವ ಸರ್ಕಾರದ ಆದೇಶ ಸಂಖ್ಯೆ: ಹಿಂವಕ 135 ಬಿಸಿಎ 2023, ದಿನಾಂಕ:27.03.2023 ರ ಆದೇಶವನ್ನು ಪ್ರಶ್ನಿಸಿ ಘನ ಸರ್ವೋಚ್ಚ ನ್ಯಾಯಾಲಯದಲ್ಲಿ ರಿಟ್ ಪಿಟಿಷನ್ ಸಂಖ್ಯೆ: 435/2023 ಮತ್ತು 468/2023 ಪ್ರಕರಣಗಳು ದಾಖಲಾಗಿರುತ್ತವೆ. ಈ ಪ್ರಕರಣಗಳಿಗೆ ಸಂಬಂಧಿಸಿದಂತೆ, ದಿನಾಂಕ:25.04.2023ರಂದು ನಡೆದ ವಿಚಾರಣೆಯಲ್ಲಿ ಪ್ರಕರಣದ ಬಗ್ಗೆ ರಾಜ್ಯ ಸರ್ಕಾರವನ್ನು ಪ್ರತಿನಿಧಿಸುತ್ತಿರುವ Solicitor General ರವರು ಪರಿಷ್ಕೃತ ಪುನರ್ ವರ್ಗೀಕರಣದ ಸರ್ಕಾರದ ಆದೇಶ ಸಂಖ್ಯೆ: ಹಿಂವಕ 135 ಬಿಸಿಎ 2023, ದಿನಾಂಕ:27.03.2023ರ ಆದೇಶವನ್ನು ಶಿಕ್ಷಣ ಮತ್ತು ಉದ್ಯೋಗಕ್ಕಾಗಿ ಅಳವಡಿಸಿಕೊಳ್ಳಲಾಗುವುದಿಲ್ಲವೆಂದು ಹಾಗೂ ಪ್ರಸ್ತುತ ಚಾಲ್ತಿಯಲ್ಲಿರುವ ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿನಾಂಕ:30.03.2002ನ್ನು ಮುಂದುವರೆಸಲಾಗುವುದು ಎಂಬ ಹೇಳಿಕೆಯನ್ನು (Statement of Record) ದಾಖಲಿಸಿರುತ್ತಾರೆ. |
| ಆ) | ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಅಧಿನಿಯಮ-1995 (ಅಧ್ಯಾಯ-3) ರ ಉಪ ಪ್ರಕರಣ 9 (2) ರಲ್ಲಿ ಆಯೋಗವು ನೀಡಿದ ಶಿಫಾರಸ್ಸುಗಳನ್ವಯ ಜಯ ಪ್ರಕಾಶ್ ಹೆಗಡೆಯವರು ನೀಡಿದ ವಿಶೇಷ ವರದಿಯಲ್ಲಿ ಉಲ್ಲೇಖಿಸಿರುವ ಚಪ್ಪರಬಂದ, ಕಾಡುಗೊಲ್ಲ, ಗೌಳಿ, ಕುಡುಬಿ, ಖಂಜರ ಭಾಟ್ ಇಂತಹ ಅಲೆಮಾರಿ ಸಮುದಾಯಗಳನ್ನು ಅಲೆಮಾರಿ ಜಾತಿ ಪಟ್ಟಿಯನ್ನು ಪರಿಷ್ಕರಿಸಲು ಸರ್ಕಾರ ಕೈಗೊಳ್ಳಬಹುದಾದ ಕ್ರಮವೇನು? | |

| | | |
|---|---|---|
| | | ದಿನಾಂಕ:27.03.2023 ರ ಸರ್ಕಾರದ ಆದೇಶವನ್ನು ಪ್ರಶ್ನಿಸಿ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 7586/2023 ಹಾಗೂ 8976/2023 ಪ್ರಕರಣಗಳು ದಾಖಲಾಗಿರುತ್ತವೆ. ರಿಟ್ ಅರ್ಜಿ ಸಂಖ್ಯೆ: 26045/2022 (GM-RES) PIL ಶ್ರೀ ಡಿ.ಜಿ. ರಾಘವೇಂದ್ರ ವಿರುದ್ಧ, ರಾಜ್ಯ ಸರ್ಕಾರ ಪ್ರಕರಣದಲ್ಲಿ ಸರ್ಕಾರವು ದಿನಾಂಕ:23.03.2023 ರಂದು ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿನಾಂಕ:30.03.2002ರ ಆದೇಶದ ಪ್ರವರ್ಗ-II (ಎ) ಗೆ ಮೀಸಲಾತಿ ಪ್ರಮಾಣದ ಬದಲಾವಣೆ ಮತ್ತು ಯಾವುದೇ ಸಮುದಾಯಗಳನ್ನು ಪ್ರವರ್ಗ-II (ಎ)ಗೆ ಸೇರಿಸುವುದು ಅಥವಾ ಕೈಬಿಡುವುದನ್ನು ಮಾನ್ಯ ಉಚ್ಚ ನ್ಯಾಯಾಲಯದ ಮುಂದಿನ ಅನುಮತಿ ಇಲ್ಲದೆ ಜಾರಿಗೊಳಿಸುವುದಿಲ್ಲವೆಂದು Compliance/ Undertaking Affidavit ನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಲಾಗಿದೆ.<br><br>ಪ್ರಕರಣಗಳು ಮಾನ್ಯ ಘನ ಸರ್ವೋಚ್ಚ ನ್ಯಾಯಾಲಯದಲ್ಲಿ ಹಾಗೂ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಇತ್ಯರ್ಥಕ್ಕೆ ಬಾಕಿ ಇರುತ್ತವೆ. ನ್ಯಾಯಾಲಯಗಳಲ್ಲಿ ಪ್ರಕರಣಗಳು ಇತ್ಯರ್ಥವಾದ ನಂತರ ಪರಿಶೀಲಿಸಿ ಕ್ರಮವಹಿಸಲಾಗುತ್ತದೆ. |

**ಸಂಖ್ಯೆ: ಹಿಂವಕ 113 ಬಿಸಿಎ 2026**

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.